ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಸೋಮವಾರ, ದಿನಾಂಕ 29ನೇ ಜೂನ್, 2015
(ಸಮಯ: ಮಧ್ಯಾಹ್ನ 12.00 ಗಂಟೆಗೆ)

-----

1. ಸಂತಾಪ ಸೂಚನೆ

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

3. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:-

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿ/ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ) ಶ್ರೀ ಸಿದ್ಧರಾಮಯ್ಯ (ಮುಖ್ಯಮಂತ್ರಿಗಳು) ಅವರು:-

(i) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2014ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2015ನೇ ವರ್ಷದ ಕೆರೆ ಅಭಿವೃದ್ಧಿ ಪ್ರಾಧಿಕಾರ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರವ್ಯಾಪ್ತಿಯ ಕೆರೆಗಳ ಸಂರಕ್ಷಣೆ ಮತ್ತು ಪರಿಸರ ಪುನಶ್ಚೇತನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನೆ ವರದಿ(ಸಂಖ್ಯೆ-1)ಯನ್ನು ಮಂಡಿಸುವುದು.

(ii) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2014ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ 2015ನೇ ವರ್ಷದ ಸ್ಥಳೀಯ ಸಂಸ್ಥೆಗಳ ವರದಿ (ಸಂಖ್ಯೆ-2)ಯನ್ನು ಮಂಡಿಸುವುದು.

ಆ) ಸದಸ್ಯರಿಗೆ ಈಗಾಗಲೇ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಗಳ ರೀತ್ಯಾ.

5. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಕೆ.ಆರ್.ರಮೇಶ್‌ಕುಮಾರ್ ಅವರು ರಾಜ್ಯದಲ್ಲಿನ ವಿವಿಧ ಭಾಗಗಳ ರೈತರುಗಳು ಆಯಾಯ ಪ್ರದೇಶಕ್ಕನುಗುಣವಾಗಿ ಬೆಳೆಯುತ್ತಿರುವ ಕಬ್ಬು, ಭತ್ತ, ರಾಗಿ, ಜೋಳ ಹಾಗೂ ಇನ್ನಿತರ ತೋಟಗಾರಿಕಾ ಬೆಳೆಗಳ ಬೆಳೆ ಹಾನಿ ಮತ್ತು ಬೆಲೆ ಕುಸಿತದಿಂದ ಆತ್ಮಹತ್ಯೆಗೆ ಶರಣಾಗುತ್ತಿರುವ ರೈತರ ಸಂರಕ್ಷಣೆ ಮಾಡುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಹೆಚ್.ಸಿ.ಬಾಲಕೃಷ್ಣ ಅವರು ಸರ್ಕಾರಿ ಪಡ ಜಮೀನುಗಳನ್ನು ಸ್ಥಿರೀಕರಣಗೊಳಸಲು ರೈತರುಗಳಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3. ಶ್ರೀ ಹೆಚ್.ಆರ್. ಅಲಗೂರು (ರಾಜು) ಅವರು ವಿಜಯಪುರ ವಿಮಾನ ನಿಲ್ದಾಣ ಕಾಮಗಾರಿಯನ್ನು ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾಗೆ ವಹಿಸಿ ಪೂರ್ಣಗೊಳಸುವ ಬಗ್ಗೆ ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

4. ಶ್ರೀ ಎಲ್.ಎ. ರವಿಸುಬ್ರಮಣ್ಯ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ ನಿಯಮಗಳು 2011) ನಿಯಮ 11 (2) ಹಾಗೂ 12 (2)ರ ಅನ್ವಯ 2015-16ನೇ ಸಾಲಿನ ವರ್ಗಾವಣೆ ಕೌನ್ಸಿಲಿಂಗ್‌ನ್ನು ಪ್ರಾರಂಭಿಸದಿರುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5. ಶ್ರೀ ಮನೋಹರ್ ಹೆಚ್. ತಹಶೀಲ್ದಾರ್ ಅವರು ಹಾವೇರಿ ಜಿಲ್ಲೆ ಹಾನಗಲ್ ತಾಲ್ಲೂಕು ಮಳೆ ಆಶ್ರಿತ ಪ್ರದೇಶವಾಗಿದ್ದರೂ ಕೃಷಿ ಭಾಗ್ಯ ಯೋಜನೆಯಿಂದ ಕೈಬಿಟ್ಟಿರುವ ಬಗ್ಗೆ ಮಾನ್ಯ ಕೃಷಿ ರಾಜ್ಯ ಸಚಿವರ ಗಮನ ಸೆಳೆಯುವುದು.

ಎಂ.ಗುರುರಾಜ
ಕಾರ್ಯದರ್ಶಿ

Raj Nagowda

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)